58


ಕರ್ನಾಟಕ ಸರ್ಕಾರ

ಸಮಗ್ರ ಮಕ್ಕಳ ರಕ್ಷಣಾ ಯೋಜನೆ

ಕೇರಾಫ್ ನಿರ್ದೇಶನಾಲಯ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ,

ಒಂದನೇ ಮಹಡಿ, ಬಹುಮಹಡಿಗಳ ಕಟ್ಟಡ, ಡಾ:ಬಿ.ಆರ್.ಅಂಬೇಡ್ಕರ್ ವೀದಿ, ಬೆಂಗಳೂರು-560001

**E-mail ID: icpssarakar@gmail.com** **Ph.No.080-22879382**


ಸಂಖ್ಯೆ:ಐಸಿಪಿಎಸ್/ಸಾರಾ-01/2020-21 ದಿನಾಂಕ:03.08.2020

ಎಲ್ಲಾ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು,
ಎಲ್ಲಾ ಮಕ್ಕಳ ರಕ್ಷಣಾ ಘಟಕ,
ಎಲ್ಲಾ ಜಿಲ್ಲೆಗಳು.

ಮಾನ್ಯರೇ,

ವಿಷಯ: ಹೊರ ಜಿಲ್ಲೆಗಳಿಂದ ಶಿಶು ಮಂದಿರಗಳಿಗೆ (0-6ವರ್ಷ)ವರ್ಗಾವಣೆ ಮಾಡುವ ಮಕ್ಕಳ ಕುರಿತು.

ಉಲ್ಲೇಖ: ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು ಬೆಂ.ನಗರ ಜಿಲ್ಲೆ ರವರ ಪತ್ರ ಸಂಖ್ಯೆ: ಜಿಮರಘ/ಬೆಂ.ನ/ಹೊ.ಜಿ.ಮ.ಪು.ಕು/2020-21, ದಿ:05.05.2020

* * * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಪತ್ರದಲ್ಲಿ ಬೆಂಗಳೂರು ನಗರ ಜಿಲ್ಲೆಯ ಶಿಶುಮಂದಿರಕ್ಕೆ ಕರ್ನಾಟಕದ ಬೇರೆ ಬೇರೆ ಜಿಲ್ಲೆಗಳಿಂದ ವೈದ್ಯಕೀಯ ಚಿಕಿತ್ಸೆ ಹಾಗೂ ಪುರ್ನವಸತಿಗಾಗಿ 0-6 ವರ್ಷದೊಳಗಿನ ಮಕ್ಕಳು ಹೆಚ್ಚಾಗಿ ಮಕ್ಕಳ ಕಲ್ಯಾಣ ಸಮಿತಿಯಿಂದ ಶಿಫಾರಸ್ಸಿನೊಂದಿಗೆ ದಾಖಲಾತಿಗಾಗಿ ಬರುತ್ತಿದ್ದಾರೆ. ಈಗಾಗಲೇ ಬೆಂಗಳೂರಿನಲ್ಲಿರುವ ಸರ್ಕಾರಿ ಶಿಶು ಮಂದಿರದಲ್ಲಿ ಸಾಮರ್ಥ್ಯಕ್ಕಿಂತ ಹೆಚ್ಚು ಮಕ್ಕಳು ಇರುವುದಾಗಿ ಪ್ರಸ್ತಾಪಿಸಿರುತ್ತಾರೆ.

ಈ ಕುರಿತು ತಮ್ಮ ಜಿಲ್ಲೆಗಳಲ್ಲಿರುವ 0-6 ವರ್ಷದೊಳಗಿನ ವೈದ್ಯಕೀಯ ಚಿಕಿತ್ಸೆ ಹಾಗೂ ವಿಶೇಷ ಅಗತ್ಯವುಳ್ಳ ಮಕ್ಕಳನ್ನು ತಮ್ಮ ಜಿಲ್ಲಾ ಆಸ್ಪತ್ರೆಯಲ್ಲಿ ಶಿಶುಗಳ ಚಿಕಿತ್ಸೆಗೆ ಬೇಕಾದ ವೈದ್ಯಕೀಯ ಸೌಲಭ್ಯವಿರುವುದರಿಂದ ಅಲ್ಲಿಯೇ ಚಿಕಿತ್ಸೆ ಕೊಡಿಸುವುದು ಸೂಕ್ತವೆನಿಸುತ್ತಿದೆ.

ಮುಂದುವರೆದು ಅತೀ ಅವಶ್ಯವಿರುವ ಹಾಗೂ ಜಿಲ್ಲೆಗಳಲ್ಲಿ ಹೆಚ್ಚಿನ ವೈದ್ಯಕೀಯ ಸೇವೆಗೆ ಅವಕಾಶವಿಲ್ಲದ ಜಿಲ್ಲೆಗಳಿಂದ ಶಿಶುಗಳನ್ನು ವರ್ಗಾವಣೆ ಮಾಡುವಂತಹ ಸಂದರ್ಭದಲ್ಲಿ ಆಯಾಗಳನ್ನು ಜೊತೆಯಾಗಿ ಕಳುಹಿಸಬೇಕು. ಚಿಕಿತ್ಸೆಯ ನಂತರ ಶಿಶುವಿನೊಡನೆ ವಾಪಾಸು ಜಿಲ್ಲೆಗೆ ತೆರಳಲು ಸೂಕ್ತ ಕ್ರಮ ಕೈಗೊಳ್ಳಲು ಈ ಮೂಲಕ ತಿಳಿಸಿದೆ.

ತಮ್ಮ ವಿಶ್ವಾಸಿ,

Latha. H

ಯೋಜನಾ ನಿರ್ದೇಶಕರು,
ಸಮಗ್ರ ಮಕ್ಕಳ ರಕ್ಷಣಾ ಯೋಜನೆ
ಬೆಂಗಳೂರು.

ಪ್ರತಿಯನ್ನು :

1) ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳು, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಎಲ್ಲಾ ಜಿಲ್ಲೆಗಳುರವರಿಗೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.
2) ಎಲ್ಲಾ ವಿಶೇಷ ದತ್ತು ಸಂಸ್ಥೆಗಳು, ಎಲ್ಲಾ ಜಿಲ್ಲೆಗಳು ರವರಿಗೆ ಮಾಹಿತಿ ಹಾಗೂ ಮುಂದಿನ ಕ್ರಮಕ್ಕಾಗಿ.

D\Pushpa\letters